ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರಕಛೇರಿ, ನೃಪತುಂಗರಸ್ತೆ,**
**ಬೆಂಗಳೂರು-560001.**

ಸಂಖ್ಯೆ ಸಿ7(8).ಆರ್.ಟಿ.ಇ/2021-22ನೇ ಸಾ.ದಾ.ಪ್ರ.ಪೂ.ಸಿದ್ಧತೆ/2021-22 ದಿನಾಂಕ:07.04.2021

::ಸುತ್ತೋಲೆ::

ವಿಷಯ: 2021-22ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ-2009ರ ಸೆಕ್ಷನ್ 12(1)(ಬಿ)ಮತ್ತು ಸೆಕ್ಷನ್ 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆಯ ಬಗ್ಗೆ

ಉಲ್ಲೇಖ:1) ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಕ್ಕಳ ಹಕ್ಕು ಕಾಯಿದೆ -2009
2) ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012
3) ಈ ಕಛೇರಿಯ ಪತ್ರದ ಸಮಸಂಖ್ಯೆ: ದಿನಾಂಕ:08.02.2021

@@@@@

2021-22ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1)(ಬಿ) ಮತ್ತು ಸೆಕ್ಷನ್ 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ನಡೆಸಲು ಉಲ್ಲೇಖ(1)ರ ಸುತ್ತೋಲೆಯನ್ವಯ ಕ್ರಮವಹಿಸಲಾಗಿದೆ. ಕಾರ್ಯಸೂಚಿಯನ್ವಯ ಆರ್.ಟಿ.ಇ ಅಡಿ ದಾಖಲಾತಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿ 08.04.2021 ಎಂದು ನಿಗದಿಪಡಿಸಲಾಗಿತ್ತು. ಹೆಚ್ಚು ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕವನ್ನು 20.04.2021ರವರೆಗೆ ವಿಸ್ತರಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯನ್ನು ಲಗತ್ತಿಸಿದೆ.

ಮಾನ್ಯ ಆಯುಕ್ತರ ಆದೇಶದ ಮೇರೆಗೆ

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ರವರಿಗೆ,

1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ) ಇವರ ಮೂಲಕ ಸೂಕ್ತ ಕ್ರಮಕ್ಕಾಗಿ.
3) ಹಿರಿಯ ಕಾರ್ಯಕ್ರಮಾಧಿಕಾರಿಗಳು, SATS ವಿಭಾಗ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
4) ಹಿರಿಯ ಸಹಾಯಕ ನಿರ್ದೇಶಕರು/ಸಹಾಯಕ ನಿರ್ದೇಶಕರು ಇ-ಆಡಳಿತ ವಿಭಾಗ, ಆಯುಕ್ತರ ಕಛೇರಿ, ಸಾಶಿಇ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.

## 2021-22ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾತಿಗೆ ನಿಗಧಿಪಡಿಸಿರುವ ಪರಿಷ್ಕೃತ ವೇಳಾಪಟ್ಟಿ

| ಕ್ರ ಸಂ | ಚಟುವಟಿಕೆ | ದಿನಾಂಕ | ಕ್ರಮ |
|---|---|---|---|
| 1) | ಅನುದಾನಿತ ಶಾಲೆಗಳೂ ಸೇರಿದಂತೆ ದಾಖಲಾತಿ ಕೋರಿ ಪೋಷಕರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 20.04.2021 | ಪೋಷಕರು, ಶಾಲಾ ಮುಖ್ಯಸ್ಥರು, ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 2) | ಇ.ಐ.ಡಿ. ಮೂಲಕ ಸಲ್ಲಿಸಿದ ಅರ್ಜಿಗಳ ದತ್ತಾಂಶದ ನೈಜತೆ ಪರಿಶೀಲನೆ | 23.04.2021 ರವರೆಗೆ | ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು ಮತ್ತು ಸಾಫ್ಟ್ ವೇರ್ ಡೆವಲಪ್‌ಮೆಂಟ್ ಸೆಂಟರ್ |
| 3) | ವಿಶೇಷ ಪ್ರವರ್ಗಗಳು ಮತ್ತು ಕ್ರಮಬದ್ಧವಲ್ಲದ ಅರ್ಜಿಗಳ ಪರಿಶೀಲನೆ | 23.04.2021 ರವರೆಗೆ | ಪೋಷಕರು, ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಾಫ್ಟ್ ವೇರ್ ಡೆವಲಪ್‌ಮೆಂಟ್ ಸೆಂಟರ್. |
| 4) | ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಣೆ | 30.04.2021 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |
| 5) | ಆನ್ ಲೈನ್ ತಂತಾಂಶದ ಮೂಲಕ ಮೊದಲ ಸುತ್ತಿನ ಸೀಟು ಹಂಚಿಕೆ | 07.05.2021 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್. |
| 6) | ಶಾಲೆಗಳಲ್ಲಿ ದಾಖಲಾತಿ ಪ್ರಾರಂಭ | 10.05.2021 ರಿಂದ 24.05.2021 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 7) | ಶಾಲೆಗಳಲ್ಲಿ ದಾಖಲಾದ ಮೊದಲ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು | 10.05.2021 ರಿಂದ 24.05.2021 | ಸಂಬಂಧಿಸಿದ ಶಾಲಾ ಮುಖ್ಯಸ್ಥರು, |
| 8) | ಆನ್ ಲೈನ್ ತಂತಾಂಶದ ಮೂಲಕ ಎರಡನೇ ಸುತ್ತಿನ ಸೀಟು ಹಂಚಿಕೆ | 31.05.2021 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ, ಇ-ಆಡಳಿತ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್ |

| | | | |
|---|---|---|---|
| ೯) | ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳಿಗೆ ಶಾಲೆಗಳಲ್ಲಿ ದಾಖಲಾತಿ ಅವಧಿ | 01.06.2021 ರಿಂದ 10.06.2021 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 10) | ಶಾಲೆಗಳಲ್ಲಿ ದಾಖಲಾದ ಎರಡನೇ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಳವಡಿಸುವುದು | 01.05.2021 ರಿಂದ 10.06.2021 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು |

ಮಾನ್ಯ ಆಯುಕ್ತರ ಆದೇಶದ ಮೇರೆಗೆ

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)